**Akashvani : Bangalore**
**Regional Bulletin In Kannada**
**07.05.2025 / 14.30hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**07.05.2025 / 14.30hrs**

**<><*<><>*><>**

**ಮುಖ್ಯಾಂಶಗಳು:**

1. **ಪಾಕಿಸ್ತಾನ, ಪಾಕ್ ಆಕ್ರಮಿತ ಕಾಶ್ಮೀರದ ಉಗ್ರರ ತಾಣಗಳ ಮೇಲೆ ವಾಯು ದಾಳಿ; ಭಾರತೀಯ ಸೇನೆಯಿಂದ ಆಪರೇಷನ್ ಸಿಂಧೂರ**
2. **ಪಾಕಿಸ್ತಾನಕ್ಕೆ ಆಪರೇಷನ್ ಸಿಂಧೂರ ಎಚ್ಚರಿಕೆಯ ಗಂಟೆ- ಮುಖ್ಯಮಂತ್ರಿ ಸಿದ್ದರಾಮಯ್ಯ**
3. **ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಸೂಕ್ತ ಪ್ರತ್ಯುತ್ತರ- ಪಹಲ್ಗಾಮ್ ದಾಳಿ ಸಂತ್ರಸ್ತರ ಕುಟುಂಬದವರ ಪ್ರತಿಕ್ರಿಯೆ**
4. **ಬೆಂಗಳೂರಿನಲ್ಲಿ ಇಂದು ರಕ್ಷಣಾ ಅಣಕು ಕವಾಯತು**

**<><*<><>*><>**

ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತ್ಯುತ್ತರವಾಗಿ ಭಾರತೀಯ ಸೇನೆ ನಡೆಸಿದ ಆಪರೇಷನ್ ಸಿಂಧೂರ ದಾಳಿ ಹಿನ್ನೆಲೆ ಪ್ರತಿಕ್ರಿಯೆ ನೀಡಿರುವ ಪಹಲ್ಗಾಮ್ ಉಗ್ರ ದಾಳಿಯಲ್ಲಿ ಮೃತಪಟ್ಟ ಶಿವಮೊಗ್ಗದ ಮಂಜುನಾಥ್ ತಾಯಿ ಸುಮತಿ, ಭಾರತೀಯ ಸೇನೆ ತಕ್ಕ ಉತ್ತರ ನೀಡಿದೆ. ಪ್ರಧಾನಿ ನರೇಂದ್ರ ಮೋದಿಯವರು ಸೂಕ್ತ ಸಮಯದಲ್ಲಿ ಸೂಕ್ತ ನಿರ್ಧಾರ ಕೈಗೊಂಡಿದ್ದಾರೆ ಎಂದು ಶ್ಲಾಘಿಸಿದ್ದಾರೆ. ಮಗ ಮಂಜುನಾಥ್ ಹಿಂತಿರುಗುವುದಿಲ್ಲ. ಆದರೆ ಈ ಕಾರ್ಯಾಚರಣೆಯಿಂದ ನಮ್ಮ ಕುಟುಂಬಕ್ಕೆ ಶಾಂತಿ ದೊರೆತಿದೆ. ದುಃಖದಲ್ಲಿದ್ದರೂ ಇದೊಂದು ಸಂತೋಷದ ಸಂಗತಿ ಎಂದು ಹೇಳಿದ್ದಾರೆ.

ಧ್ವನಿ: ಸುಮತಿ (   ಸೆಕೆಂಡ್ಸ್ )

ಆಪರೇಷನ್ ಸಿಂಧೂರ ಕುರಿತು ಮಂಜುನಾಥ್ ಸಂಬಂಧಿ ಡಾ.ರವಿಕಿರಣ್ ಮಾತನಾಡಿ, ಆಪರೇಷನ್ ಸಿಂಧೂರ ಹೆಸರು ಕೇಳಿಯೇ ರೋಮಾಂಚನವಾಯಿತು. ಭಾರತೀಯ ಸೇನೆಗೆ ಎಲ್ಲರೂ ಕೂಡ ಸಹಕಾರ ನೀಡಬೇಕು. ಉಗ್ರವಾದ ನಾಶವಾಗುವ ನಿಟ್ಟಿನಲ್ಲಿ ಕೆಲಸ ಮುಂದುವರೆಯಲಿ ಎಂದಿದ್ದಾರೆ. ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಮೃತಪಟ್ಟ ಭರತ್ ಭೂಷಣ್ ಅವರ ತಂದೆ ಚನ್ನವೀರಪ್ಪ ಆಕಾಶವಾಣಿಯೊಂದಿಗೆ ಮಾತನಾಡಿ, ಆಪರೇಷನ್ ಸಿಂಧೂರ ಕುರಿತು ಪ್ರತಿಕ್ರಿಯಿಸಿದ್ದಾರೆ.

ಧ್ವನಿ: ಚನ್ನವೀರಪ್ಪ(    ಸೆಕೆಂಡ್ಸ್)

**<><*<><>*><>**

ಭಾರತೀಯ ಸೇನಾಪಡೆಯು, ಪಾಕಿಸ್ತಾನ ಹಾಗೂ ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿರುವ ಉಗ್ರಗಾಮಿಗಳ ನೆಲೆಗಳನ್ನು ನಾಶಗೊಳಿಸಿ ಪರಾಕ್ರಮ ಮೆರೆದಿದ್ದಾರೆ. ಈ ಹಿನ್ನೆಲೆಯಲ್ಲಿ ರಾಜ್ಯದ ಪರವಾಗಿ ಭಾರತೀಯ ಸೇನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿನಂದನೆ ಸಲ್ಲಿಸಿದ್ದಾರೆ. ಬೆಂಗಳೂರಿನಲ್ಲಿ ಇಂದು ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಷ್ಟ್ರೀಯ ಭದ್ರತೆ ವಿಷಯಲ್ಲಿ ಯಾವುದೇ ರಾಜಿ ಸಾಧ್ಯವಿಲ್ಲ. ಈ ದಾಳಿಯನ್ನು ಪಕ್ಷಾತೀತವಾಗಿ ಎಲ್ಲರೂ ಬೆಂಬಲಿಸಿದ್ದೇವೆ. ಇದು ಪಾಕಿಸ್ತಾನಕ್ಕೆ ಎಚ್ಚರಿಕೆಯ ಗಂಟೆಯಾಗಿದೆ. ರಾಜ್ಯ ಸರ್ಕಾರ ಸೇನೆ ಕೈಗೊಂಡಿರುವ ಕ್ರಮವನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ ಎಂದು ಹೇಳಿದರು. nಆಪರೇಷನ್ ಸಿಂಧೂರ ಮೂಲಕ ಸುಮಾರು ೯ ಉಗ್ರಗಾಮಿಗಳ ನೆಲೆಗಳನ್ನು ನಾಶಗೊಳಿಸಿದೆ. ಕೇವಲ ಉಗ್ರಗಾಮಿಗಳ ನೆಲೆಗಳ ಮೇಲೆ ಮಾತ್ರ ದಾಳಿ ನಡೆಸಲಾಗಿದೆ. ಭಾರತೀಯ ಸೈನಿಕರು ಉಗ್ರರ ನೆಲೆಗಳನ್ನು ಪತ್ತೆ ಹಚ್ಚಿ, ದಾಳಿ ಮಾಡಿದ್ದು, ಅಮಾಯಕ ಜನರ ಸಾವು-ನೋವು ತಪ್ಪಿಸಿದ್ದಾರೆ. ನಮ್ಮ ಸೈನಿಕರ ಕಾರ್ಯದಕ್ಷತೆ ಅಭಿನಂದನೀಯ. ಈ ದಾಳಿಯನ್ನು ನಾವು ಸ್ವಾಗತಿಸುತ್ತೇವೆ ಎಂದರು.

ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ, (ಸೆಕೆಂಡ್ಸ್)

**<><*<><>*><>**

ಕರ್ನಾಟಕದ ಬೆಂಗಳೂರು ಸೇರಿದಂತೆ ದೇಶದ ೨೪೪ ಜಿಲ್ಲೆಗಳಲ್ಲಿ ಇಂದು ರಕ್ಷಣಾ ಅಣಕು ಕವಾಯತು ನಡೆಸಲಾಗುವುದು. ಕೇಂದ್ರ ಗೃಹ ಇಲಾಖೆ, ನಾಗರಿಕರಿಗೆ ಈ ರಕ್ಷಣಾ ಅಣಕು ಕವಾಯತು ಏರ್ಪಡಿಸಿದೆ. ಇದರ ಭಾಗವಾಗಿ ಆಯ್ದ ಪ್ರದೇಶಗಳಲ್ಲಿ ವಾಯುದಾಳಿ ಎಚ್ಚರಿಕೆ ಸೈರನ್‌ಗಳು ಮೊಳಗಲಿವೆ. ವಿದ್ಯಾರ್ಥಿಗಳು ಮತ್ತು ನಾಗರಿಕರಿಗೆ ವೈಮಾನಿಕ ದಾಳಿ ಅಥವಾ ಬಾಂಬ್ ದಾಳಿಯಂತಹ ತುರ್ತು ಸಂದರ್ಭದಲ್ಲಿ ಹೇಗೆ ಪ್ರತಿಕ್ರಿಯಿಸಬೇಕೆಂಬುದರ ಕುರಿತು ತಿಳಿಸಿಕೊಡಲಾವುದು. ಶತ್ರು ದಾಳಿ ಸಂದರ್ಭದಲ್ಲಿ ಕಿಟಕಿಗಳಿಂದ ಮನೆ ಹೊರಗೆ ಬೆಳಕು ಹೋಗದಂತೆ ಮುಚ್ಚುವುದು, ವಿದ್ಯುತ್ ಮುಖ್ಯ ಸ್ಥಾವರಗಳು, ಪ್ರಮುಖ ಸಾರಿಗೆ ವ್ಯವಸ್ಥೆಯನ್ನು ರಕ್ಷಿಸುವುದರ ಬಗ್ಗೆ ಕ್ರಮ ವಹಿಸುವುದು ಮತ್ತು ತುರ್ತು ಸಂದರ್ಭದಲ್ಲಿ ಒಂದು ಸ್ಥಳದಿಂದ ಇನ್ನೊಂದು ಸ್ಥಳಕ್ಕೆ ಪಾರಾಗುವುದರ ಬಗ್ಗೆ ಅಣಕು ಕವಾಯತು ನಡೆಯಲಿದೆ.

**<><*<><>*><>**

ಪಾಕಿಸ್ತಾನದ ಭಯೋತ್ಪಾದಕ ತಾಣಗಳ ಮೇಲೆ ಅಪರೇಷನ್ ಸಿಂಧೂರ ಕಾರ್ಯಚರಣೆ ನಡೆಸಿದ ಬೆನ್ನಲ್ಲೇ ದೆಹಲಿಯಲ್ಲಿ ತುರ್ತು ಪತ್ರಿಕಾಗೋಷ್ಠಿ ನಡೆಸಲಾಯಿತು.ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಮತ್ತು ಭಾರತೀಯ ಸೇನೆಯ ಕರ್ನಲ್ ಸೋಫಿಯಾ ಖುರೇಷಿ ಅವರೊಂದಿಗೆ ಮಾಧ್ಯಮಗಳಿಗೆ ಮಾಹಿತಿ ನೀಡಿದ ಭಾರತೀಯ ವಾಯುಪಡೆಯ ವಿಂಗ್ ಕಮಾಂಡರ್ ವ್ಯೋಮಿಕಾ ಸಿಂಗ್, ಪಹಲ್ಗಾಮ್ ಭಯೋತ್ಪಾದಕ ದಾಳಿಯ ಸಂತ್ರಸ್ತರು ಮತ್ತು ಅವರ ಕುಟುಂಬಗಳಿಗೆ ನ್ಯಾಯ ಒದಗಿಸಲು ಆಪರೇಷನ್ ಸಿಂಧೂರ್' ಪ್ರಾರಂಭಿಸಲಾಗಿದೆ ಎಂದು ಹೇಳಿದರು. ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ, ಭಾರತೀಯ ಸಶಸ್ತ್ರ ಪಡೆಗಳು ಆಪರೇಷನ್ ಸಿಂಧೂರ' ಅಡಿಯಲ್ಲಿ ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರದ ಭಯೋತ್ಪಾದಕ ಅಡಗುತಾಣಗಳ ಮೇಲೆ ದಾಳಿ ನಡೆಸಿವೆ. ಒಟ್ಟು ಒಂಬತ್ತು ಭಯೋತ್ಪಾದಕ ತಾಣಗಳನ್ನು ಗುರಿಯಾಗಿಸಿಕೊಂಡು ಯಶಸ್ವಿಯಾಗಿ ನಾಶಪಡಿಸಲಾಗಿದೆ ಎಂದು ವಿಂಗ್ ಕಮಾಂಡರ್ ವ್ಯೋಮಿಕಾ ಸಿಂಗ್ ಮಾಹಿತಿ ನೀಡಿದರು. ನಾಗರಿಕರು ಮತ್ತು ಅವರ ಮೂಲಸೌಕರ್ಯಗಳಿಗೆ ಯಾವುದೇ ಹಾನಿಯಾಗದಂತೆ ಸ್ಥಳಗಳನ್ನು ಆಯ್ಕೆ ಮಾಡಲಾಗಿದೆ ಎಂದು ಅವರು ಸ್ಪಷ್ಟಪಡಿಸಿದರು. ಇದೇ ವೇಳೆ ಕರ್ನಲ್ ಸೋಫಿಯಾ ಖುರೇಷಿ ಅವರು ಮುರಿಡ್ಕೆ ಸೇರಿದಂತೆ ಭಯೋತ್ಪಾದಕ ಶಿಬಿರಗಳ ನಾಶದ ವಿಡಿಯೋಗಳನ್ನು ಪ್ರಸ್ತುತಪಡಿಸಿದರು.

**<><*<><>*><>**

ಭಾರತೀಯ ಸಶಸ್ತ್ರ ಪಡೆಗಳು ನಡೆಸಿದ ಆಪರೇಷನ್ ಸಿಂಧೂರ ಕಾರ್ಯಚರಣೆಯನ್ನು ಪಕ್ಷಾತೀತವಾಗಿ ನಾಯಕರು ಶ್ಲಾಘಿಸಿದ್ದಾರೆ.ಈ ಕುರಿತು ಸಾಮಾಜಿಕ ತಾಣ ಎಕ್ಸ್ ನಲ್ಲಿ ಪ್ರತಿಕ್ರಿಯಿಸಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ, ಆಪರೇಷನ್ ಸಿಂಧೂರ ಪಹಲ್ಗಾಮ್‌ನಲ್ಲಿ ದೇಶದ ಮುಗ್ಧ ಸಹೋದರರ ಕ್ರೂರ ಹತ್ಯೆಗೆ ಭಾರತದ ಪ್ರತಿಕ್ರಿಯೆಯಾಗಿದೆ. ಭಾರತ ಮತ್ತು ಅದರ ಜನರ ಮೇಲಿನ ಯಾವುದೇ ದಾಳಿಗೆ ಸೂಕ್ತ ಉತ್ತರ ನೀಡಲು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ನಿರ್ಧರಿಸಿದೆ ಎಂದು ಅವರು ಹೇಳಿದರು. ಭಯೋತ್ಪಾದನೆಯನ್ನು ಅದರ ಬೇರುಗಳಿಂದ ನಿರ್ಮೂಲನೆ ಮಾಡಲು ಭಾರತ ದೃಢವಾಗಿ ಬದ್ಧವಾಗಿದೆ ಎಂದು ಅವರು ಹೇಳಿದರು.

<><*<><>*><>

ಭಾರತೀಯ ಸಶಸ್ತ್ರ ಪಡೆಗಳು ನಿನ್ನೆ ಮಧ್ಯರಾತ್ರಿ ೧.೦೫ ರಿಂದ ೧.೩೦ ರ ನಡುವೆ ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರದ ಭಯೋತ್ಪಾದಕ ತಾಣಗಳ ಮೇಲೆ ದಾಳಿ ನಡೆಸಿವೆ. ಒಟ್ಟು ಒಂಬತ್ತು ತಾಣಗಳನ್ನು ಗುರಿಯಾಗಿಸಿ ದಾಳಿ ಮಾಡಲಾಗಿದೆ ಎಂದು ರಕ್ಷಣಾ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ.  ಪ್ರಧಾನಿ ನರೇಂದ್ರ ಮೋದಿ ಅವರು ರಾತ್ರಿಯಿಡೀ ಆಪರೇಷನ್ ಸಿಂಧೂರವನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡಿದರು. ಇದೇ ವೇಳೆ ಪಾಕಿಸ್ತಾನದ ಯಾವುದೇ ಮಿಲಿಟರಿ ಸೌಲಭ್ಯಗಳನ್ನು ಗುರಿಯಾಗಿಸಲಾಗಿಲ್ಲ. ಗುರಿಗಳ ಆಯ್ಕೆ ಮತ್ತು ಕಾರ್ಯಗತಗೊಳಿಸುವ ವಿಧಾನದಲ್ಲಿ ಭಾರತವು ಸಾಕಷ್ಟು ಸಂಯಮವನ್ನು ಪ್ರದರ್ಶಿಸಿದೆ ಎಂದು ಸಚಿವಾಲಯ ತಿಳಿಸಿದೆ. ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ೨೫ ಭಾರತೀಯರು ಮತ್ತು ಒಬ್ಬ ನೇಪಾಳಿ ಪ್ರಜೆ ಸಾವನ್ನಪ್ಪಿದ ಹಿನ್ನೆಲೆಯಲ್ಲಿ ಈ ಕ್ರಮಗಳನ್ನು ಕೈಗೊಳ್ಳಲಾಗಿದೆ. ಈ ದಾಳಿಗೆ ಕಾರಣರಾದವರನ್ನು ಹೊಣೆಗಾರರನ್ನಾಗಿ ಮಾಡಲಾಗುವುದು ಎಂಬ ಬದ್ಧತೆಗೆ ಸಶಸ್ತ್ರ ಪಡೆಗಳು ಬದ್ಧವಾಗಿವೆ ಎಂದು ರಕ್ಷಣಾ ಸಚಿವಾಲಯ ಹೇಳಿದೆ.

<><*<><>*><>

ಭಾರತದ ಆಪರೇಷನ್ ಸಿಂಧೂರ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ ಮುಂಬರುವ ಮೂರು ರಾಷ್ಟ್ರಗಳ ಭೇಟಿಯನ್ನು ಮುಂದೂಡಿದ್ದಾರೆ. ಕ್ರೊಯೇಷ್ಯಾ, ನಾರ್ವೆ ಮತ್ತು ನೆದರ್ಲೆಂಡ್ಸ್ ಗೆ ಪ್ರಧಾನಿ ಭೇಟಿ ನೀಡಬೇಕಿತ್ತು. ಈ ಮಧ್ಯೆ, ಭಾರತೀಯ ಸೇನೆ ನಡೆಸಿದ ಆಪರೇಷನ್ ಸಿಂಧೂರ ದಾಳಿಗೆ ಪ್ರಧಾನಿ ಹೆಮ್ಮೆ ವ್ಯಕ್ತಪಡಿಸಿದ್ದಾರೆ. ನಮ್ಮ ಸೇನೆ ವೈಜ್ಞಾನಿಕವಾಗಿದ್ದು, ಭಯೋತ್ಪಾದನೆಗೆ ನಿರ್ಮೂಲನೆ ಮಾಡಲು ಭಾರತ ಬದ್ಧವಾಗಿದೆ ಎಂದು ಹೇಳಿದ್ದಾರೆ.

<><*<><>*><>